**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿಸಿ ನಂ.7/2022**

**ಫಿರ್ಯಾದುದಾರರುಃ** ಲಕ್ಷ್ಮಮ್ಮ, ಕೋಂ ಲೇಟ್ ಮರಿಯಣ್ಣ,
ವಯಸ್ಸು ಸುಮಾರು 50 ವರ್ಷ, ವಾಸಃ ವಿ.ಪಿ.ಬೋರೆ,
ಹುಣಸೂರು ಟೌನ್, ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಸಣ್ಣಯ್ಯ, ಬಿನ್ ಲೇಟ್ ಸಣ್ಣಯ್ಯ,
ವಯಸ್ಸು ಸುಮಾರು 56ವರ್ಷ,
ವಾಸಃ ಬನ್ನಿಕುಪ್ಪೆ ಗ್ರಾಮ, ಕಸಬಾ ಹೋಬಳಿ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಲಕ್ಷ್ಮಮ್ಮರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿಯಿತು |
| ಪ್ರಶ್ನೆ 2: | ಪಿ.ಡಬ್ಲ್ಯೂ.1 ಲಕ್ಷ್ಮಮ್ಮರವರು ತಮ್ಮ ಸಾಕ್ಷ್ಯದಲ್ಲಿ, ನೀವು ಮತ್ತು ಅವರು ಹಲವಾರು ವರ್ಷಗಳಿಂದ ಪರಿಚಯಸ್ಥರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಪರಿಚಯದ ಆಧಾರದ ಮೇಲೆ ನೀವು ದಿನಾಂಕಃ 10.01.2020ರಂದು ಅವರನ್ನು ಭೇಟಿಯಾಗಿ ನಿಮ್ಮ ಕಾನೂನು ಬದ್ಧ ಅವಶ್ಯಕತೆಗಾಗಿ ಅಂದರೆ ಗೃಹ ಕೃತ್ಯದ ವೆಚ್ಚಕ್ಕಾಗಿ ಮತ್ತು ಮರದ ವ್ಯಾಪಾರದ ಸಲುವಾಗಿ ಅವರಿಂದ |

| | |
|---|---|
| | ರೂ.3,50,000/- ಗಳನ್ನು ಅಲ್ಪಾವಧಿ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ:4 | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲವನ್ನು ಪಡೆದುಕೊಳ್ಳುವ ಸಮಯದಲ್ಲಿ ನೀವು 13.03.2020 ಎಂದು ದಿನಾಂಕ ನಮೂದಿಸಿದ ಇಂಡಿಯನ್ ಓವರ್ ಸೀಸ್ ಬ್ಯಾಂಕ್, ಹುಣಸೂರು ಶಾಖೆಯ ಚೆಕ್ ನಂ.000020 ಅನ್ನು ರೂ.3,50,000/- ಗಳಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಸಿಂಡಿಕೇಟ್ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕೆ ಸದರಿ ಚೆಕ್ ದಿನಾಂಕಃ 18.03.2020 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 18.03.2020 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸನ್ನು ನೀಡಿದ್ದು, ಸದರಿ ನೋಟೀಸು ನಿಮಗೆ ದಿನಾಂಕಃ 24.03.2020ರಂದು ಖುದ್ದಾಗಿ ಜಾರಿಯಾಗಿದ್ದರೂ ಸಹ ನೀವು ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಉದ್ದೇಶಪೂರ್ವಕವಾಗಿ ಮರುಪಾವತಿಸಿಲ್ಲ ಹಾಗು ನೋಟೀಸಿಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೆಬಲ್ ಇನ್ಸ್ಟುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ ಮತ್ತು ಅಂಚೆ ಸ್ವೀಕೃತಿ ಪತ್ರವನ್ನು ನಿಪಿ-1 ರಿಂದ ನಿಪಿ-5 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 9: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇಲ್ಲ |
| ಪ್ರಶ್ನೆ 10: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇಲ್ಲ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 16.07.2025.

ANITHA Digitally signed by ANITHA Date: 2025.07.16 16:59:32 +0530

(ಅನಿತ)

**ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ